# Akashvani : Bangalore
# Regional Bulletin In Kannada
# 18.01.2026 / 18.40 hrs
# ಆಕಾಶವಾಣಿ ಬೆಂಗಳೂರು
# ಪ್ರದೇಶ ಸಮಾಚಾರ
# 18.01.2026 / 18.40 hrs

ಮುಖ್ಯಾಂಶಗಳು

1. ಸುತ್ತೂರು ಜಾತ್ರಾ ಮಹೋತ್ಸವ ; ಕೃಷಿ ವಿಚಾರ ಸಂಕಿರಣ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ಹಳೆ ಪಿಂಚಣಿ ಪದ್ಧತಿ ಜಾರಿಗೆ ರಾಜ್ಯ ಸರ್ಕಾರಿ ನೌಕರರ ಸಂಘ ಒತ್ತಾಯ
3. ಪರಿಶಿಷ್ಟ ಪಂಗಡದಲ್ಲಿಯೂ ಒಳಮೀಸಲಾತಿ ಜಾರಿಗೆ ಪರಿಶಿಷ್ಟ ಪಂಗಡಗಳ ಒಳಮೀಸಲಾತಿ ಹೋರಾಟ ಸಮಿತಿ ಆಗ್ರಹ
4. ವಿಜಯ್ ಹಜಾರೆ ಕ್ರಿಕೆಟ್ ಟ್ರೋಫಿ ; ಫೈನಲ್ ಪಂದ್ಯದಲ್ಲಿಂದು ಸೌರಾಷ್ಟ್ರ ತಂಡಕ್ಕೆ 318 ರನ್‌ಗಳ ಗುರಿ ನೀಡಿದ ವಿದರ್ಭ

***************

ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಸುತ್ತೂರು ಜಾತ್ರಾ ಮಹೋತ್ಸವ ಅಂಗವಾಗಿ ಏರ್ಪಡಿಸಿರುವ ಕೃಷಿ ವಿಚಾರ ಸಂಕಿರಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒಂದು ಸಾವಿರ ವರ್ಷಗಳಿಗೂ ಹೆಚ್ಚು ಇತಿಹಾಸವಿರುವ ಸುತ್ತೂರು ಮಠ, ಶಿಕ್ಷಣಕ್ಕೆ ಮೊದಲಿನಿಂದಲೂ ಹೆಚ್ಚು ಒತ್ತು ನೀಡುತ್ತಾ ಬಂದಿದೆ. ಧಾರ್ಮಿಕವಾಗಿ ತೊಡಗಿಸಿಕೊಂಡಿರುವ ಜೊತೆಗೆ ಜ್ಞಾನ ಮತ್ತು ಅನ್ನದಾಸೋಹಕ್ಕೆ ಮಹತ್ವ ನೀಡಿದೆ ಎಂದು ಹೇಳಿದರು.

ಶಿಕ್ಷಣದಿಂದ ವ್ಯಕ್ತಿತ್ವ ಹಾಗೂ ಮನುಷ್ಯತ್ವ ರೂಪಿಸಿಕೊಳ್ಳಲು ಸಾಧ್ಯ. ಶಿಕ್ಷಣದಿಂದ ಮಾತ್ರ ಸ್ವಾಭಿಮಾನ ಬರಲು ಸಾಧ್ಯವಾಗುವುದರಿಂದ ಶಿಕ್ಷಣವೇ ಬಹಳ ಮುಖ್ಯ. ಈ ಹಿಂದೆ ನೂರಕ್ಕೆ ಶೇಕಡ 75ರಷ್ಟು ಜನರು ಶಿಕ್ಷಣ ಸಂಸ್ಕೃತಿಯಿಂದ ವಂಚಿತರಾಗಿದ್ದರು. ಅದನ್ನು ಮನಗಂಡ ಸುತ್ತೂರು ಮಠ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ಸಂಸ್ಥೆಗಳನ್ನು ತೆರೆದಿದೆ ಎಂದರು.

***************

ರಾಜಸ್ಥಾನ, ಛತ್ತೀಸ್‌ಗಡ, ಹಿಮಾಚಲ ಪ್ರದೇಶ ಸೇರಿದಂತೆ ದೇಶದ 8 ರಾಜ್ಯಗಳಲ್ಲಿ ಸರಕಾರಿ ನೌಕರರಿಗೆ ಹಳೆ ಪಿಂಚಣಿ ಪದ್ಧತಿ ಜಾರಿಗೆ ತರಲು ಸಿದ್ಧತೆಗಳು ನಡೆದಿದ್ದು, ರಾಜ್ಯದಲ್ಲಿ ಇದೇ ಪದ್ಧತಿ ಜಾರಿಯಾಗಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ಒತ್ತಾಯಿಸಿದ್ದಾರೆ.

ದಾವಣಗೆರೆಯಲ್ಲಿಂದು ನಡೆದ ಅಖಿಲ ಕರ್ನಾಟಕ ಎನ್‌ಪಿಎಸ್ ನೌಕರರ ಸಂಘದ 2ನೇ ರಾಜ್ಯ ಕಾರ್ಯಕಾರಿಣಿ ಉದ್ಘಾಟಿಸಿ ಅವರು ಮಾತನಾಡಿದರು.

ಎನ್.ಪಿ.ಎಸ್ ಯೋಜನೆಯನ್ನು ರದ್ದುಪಡಿಸಿ, ಹಳೆಯ ಪಿಂಚಣಿ ಯೋಜನೆ ಜಾರಿಗೆ ತರದಿದ್ದರೆ, ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು.

***************

ರಾಜ್ಯ ಸರ್ಕಾರ ಪರಿಶಿಷ್ಟ ಪಂಗಡದಲ್ಲಿಯೂ ಒಳ ಮೀಸಲಾತಿ ಜಾರಿಗೆ ತರಬೇಕು ಎಂದು ವಿಧಾನ ಪರಿಷತ್ ಸದಸ್ಯ ಶಾಂತಾರಾಮ ಸಿದ್ದಿ ಆಗ್ರಹಿಸಿದರು.

ಪರಿಶಿಷ್ಟ ಪಂಗಡಗಳ ಒಳಮೀಸಲಾತಿ ಹೋರಾಟ ಸಮಿತಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ನೇತೃತ್ವದಲ್ಲಿ ಮಂಗಳೂರಿನಲ್ಲಿಂದು 'ಎಸ್‌ಟಿ ಮೀಸಲಾತಿ ಸಾಧ್ಯತೆ' ಕುರಿತು ಬುಡಕಟ್ಟು ಸಮುದಾಯಗಳ ನಾಯಕರೊಂದಿಗೆ ಸಮಾಲೋಚನಾ ಸಭೆಯ ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಜಾರಿ ಮಾಡುವ ವಿಚಾರದಲ್ಲಿ 2024ರ ಆಗಸ್ಟ್ 1ರಂದು ಸುಪ್ರೀಂ ಕೋರ್ಟ್‌ನ ಏಳು ಸದಸ್ಯರ ಸಂವಿಧಾನ ಪೀಠ ನೀಡಿದ ತೀರ್ಪು ಐತಿಹಾಸಿಕವಾದದ್ದು. ಈ ತೀರ್ಪಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೀಸಲಾತಿಯನ್ನು ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು ಸ್ಪಷ್ಟವಾಗಿ ಹೇಳಲಾಗಿದೆ ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್ ಪರಿಶಿಷ್ಟ ಜಾತಿಗಳಿಗೆ ಮಾತ್ರವಲ್ಲ, ಪರಿಶಿಷ್ಟ ಪಂಗಡಗಳಿಗೂ ಅನ್ವಯಿಸಿಯೇ ಈ ತೀರ್ಪನ್ನು ನೀಡಿದೆ. ಆದರೆ, ಕರ್ನಾಟಕ ಸರ್ಕಾರ ಪರಿಶಿಷ್ಟ ಜಾತಿಗಳತ್ತ ಮಾತ್ರ ಗಮನಹರಿಸುತ್ತಿದೆ. ಪರಿಶಿಷ್ಟ ಪಂಗಡದಲ್ಲೂ ಒಳ ಮೀಸಲಾತಿಗೆ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

***************

ಪಿಎಂ ವಿಶ್ವಕರ್ಮ ಯೋಜನೆಯು ತಾಂತ್ರಿಕ ನೆರವು, ತರಬೇತಿ ಮತ್ತು ಸರಿಯಾದ ಮಾರುಕಟ್ಟೆಗಳಿಗೆ ಪ್ರವೇಶವನ್ನು ಒದಗಿಸುವ ಮೂಲಕ ಕುಶಲಕರ್ಮಿಗಳಿಗೆ ಬೆಂಬಲ ನೀಡುತ್ತಿದೆ ಎಂದು ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ 'ಪಿಎಂ ವಿಶ್ವಕರ್ಮ ಹಾತ್ 2026'ರ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಸಚಿವರು, ಮುಂಬರುವ ದಿನಗಳಲ್ಲಿ, ಈ ಕುಶಲಕರ್ಮಿಗಳು ಉದ್ಯಮಿಗಳಾಗಿ ಹೊರಹೊಮ್ಮುತ್ತಾರೆ ಮತ್ತು ದೇಶದ ವಿಕಸಿತ ಭಾರತದ ಕಡೆಗೆ ಕೊಡುಗೆ ನೀಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮವು ಕುಶಲಕರ್ಮಿಗಳಿಗೆ ತಮ್ಮ ಉತ್ಪನ್ನಗಳನ್ನು ಬ್ರ್ಯಾಂಡಿಂಗ್ ಮತ್ತು ಮಾರಾಟ ಮಾಡಲು ವೇದಿಕೆಯನ್ನು ಒದಗಿಸುತ್ತಿದೆ. ಈ ಯೋಜನೆಯು ದೇಶದಲ್ಲಿ ನಿರುದ್ಯೋಗವನ್ನು ಕೊನೆಗೊಳಿಸುವ ಒಂದು ಮಾಧ್ಯಮವಾಗಿದೆ ಎಂದು ಕೇಂದ್ರ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವ ಜಿತಿನ್ ರಾಮ್ ಮಾಂಝಿ ಹೇಳಿದರು.

ಈ ಪ್ರದರ್ಶನವು ಕುಶಲಕರ್ಮಿಗಳು ತಮ್ಮ ಕರಕುಶಲ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಖರೀದಿದಾರರು, ಪಾಲುದಾರರು ಮತ್ತು ಸಾರ್ವಜನಿಕರಿಗೆ ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಒಂದು ಪ್ರಮುಖ ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

***************

ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿಂದು ರಾಜ್ಯ ಮಟ್ಟದ ಯುವ ಸಂಭ್ರಮ ಕಾರ್ಯಕ್ರಮಕ್ಕೆ ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಯುವಜನ ಮೇಳಗಳ ಆಯೋಜನೆಯಿಂದ ಕಲಾವಿದರ ಕಲಾ ಪ್ರತಿಭೆಗಳ ಪ್ರದರ್ಶನಕ್ಕೆ ಸೂಕ್ತ ವೇದಿಕೆ ದೊರೆತಂತಾಗುತ್ತದೆ. ಕಳೆದ ಕೆಲವು ವರ್ಷದಿಂದ ಯುವಜನ ಮೇಳಗಳು ಸ್ಥಗಿತಗೊಂಡಿದ್ದು, ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಯುವಜನ ಮೇಳ, ಯವಜನೋತ್ಸವದಂತಹ ಕಾರ್ಯಕ್ರಮಗಳನ್ನು ಸ್ಥಗಿತಗೊಳಿಸಬಾರದು ಎಂದು ಒತ್ತಾಯಿಸಿದರು.

ಜನಪದ ಕಲೆಗಳು ನಶಿಸಿ ಹೋಗುತ್ತಿರುವ ಇಂದಿನ ಕಾಲಘಟ್ಟದಲ್ಲಿ ಗ್ರಾಮೀಣ ಭಾಗವಾದ ಸುಳ್ಯದಲ್ಲಿ ಯುವ ಸಂಭ್ರಮವನ್ನು ಸಂಘಟಿಸಿ, ಆ ಮೂಲಕ ಜನಪದೀಯ ಭಾರತೀಯ ಸಂಸ್ಕೃತಿ, ಪರಂಪರೆಯನ್ನು ಉಳಿಸಿ, ಬೆಳೆಸುವ ಕಾರ್ಯ ಆಗುತ್ತಿರುವುದು ಶ್ಲಾಘನೀಯ ಎಂದು ನಳಿನ್ ಕುಮಾರ್ ಕಟೀಲ್ ಹೇಳಿದರು.

***************

ಚಿಕ್ಕಮಗಳೂರು ಜಿಲ್ಲೆಯ ಯುವ ವಿಜ್ಞಾನಿ ಆವೇಜ್ ಅಹಮ್ಮದ್ ಅವರಿಗೆ ಈ ಬಾರಿ ದೆಹಲಿಯಲ್ಲಿ ನಡೆಯುವ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ರಾಷ್ಟ್ರಪತಿ ಭವನ ಆಹ್ವಾನ ನೀಡಿದೆ.

ಆವೇಜ್ ಅಹಮದ್ ಅವರು ಚಿಕ್ಕಮಗಳೂರು ಜಿಲ್ಲೆಯ ಆಲ್ದೂರು ಗ್ರಾಮದವರಾಗಿದ್ದು, ಪ್ರಸ್ತುತ ಬೆಂಗಳೂರಿನಲ್ಲಿ ಬಾಹ್ಯಾಕಾಶ ನೌಕೆಗಳ ಬಿಡಿ ಭಾಗ ತಯಾರಿಕೆಯ ಪಿಕ್ಸೆಲ್ ಎಂಬ ಕಂಪನಿ ನಡೆಸುತ್ತಿದ್ದಾರೆ. ಈ ಕಂಪನಿ ಮೂಲಕ ಅವರು ಉಪಗ್ರಹಗಳ ತಯಾರಿಕೆ ಮತ್ತು ಉಡಾವಣೆ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದಾರೆ.

***************

ಪ್ರಸಕ್ತ ಸಾಲಿಗೆ ಮುಂಗಾರು ಹಂಗಾಮಿಗೆ ಗುಣಮಟ್ಟದ ಮೆಕ್ಕೆಜೋಳ ಖರೀದಿ ಯೋಜನೆಯಡಿ ಪ್ರತಿ ಎಕರೆಗೆ 12 ಕ್ವಿಂಟಾಲ್‌ನಂತೆ ಪ್ರತಿ ರೈತರಿಗೆ ಗರಿಷ್ಠ 50 ಕ್ವಿಂಟಾಲ್‌ನಂತೆ ಗರಿಷ್ಠ 2 ಸಾವಿರದ 150 ರೂಪಾಯಿ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ಬೆಂಬಲ ಬೆಲೆಗೆ ಮೆಕ್ಕೆಜೋಳ ಉತ್ಪನ್ನಕ್ಕೆ ನಿಯಂತ್ರಿತ ಮಾರುಕಟ್ಟೆಗಳಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ವಹಿವಾಟಿನ ಧಾರಣೆಯ ಆಧಾರದ ಮೇಲೆ ರೈತರಿಗೆ ಬೆಲೆ ವ್ಯತ್ಯಾಸದ ಮೊತ್ತವನ್ನು ಪಾವತಿಸಲು ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಮತ್ತು ವಿವಿಧ ತಾಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ನೋಂದಣಿ ಕೇಂದ್ರ ಸ್ಥಾಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಸುದ್ದಿ–ಸಂದೇಶ ರವಾನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಪ್ರತಿದಿನವೂ ಕಾರ್ಯನಿರತವಾಗಿರುವ ಪತ್ರಕರ್ತರ ಅರೋಗ್ಯ ಹಾಗೂ ಮನರಂಜನೆಗೆ ಕ್ರೀಡೆ ತುಂಬಾ ಮುಖ್ಯವಾಗಿದೆ ಎಂದು ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹೇಳಿದ್ದಾರೆ.

ಮಡಿಕೇರಿಯ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಪತ್ರಕರ್ತರ ಸಂಕ್ರಾಂತಿ ಸಂಭ್ರಮ ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಕರ್ತರು ಸಮಾಜದ ಕೇಂದ್ರಬಿಂದು. ಸುಸ್ಥಿತಿಯ ಸಮಾಜ ನಿರ್ಮಾಣಕ್ಕೆ ಪತ್ರಕರ್ತರ ಕೊಡುಗೆ ಅಪಾರವಾದುದು. ಅಂತೆಯೇ ಆರ್ಥಿಕ, ಸಾಮಾಜಿಕ, ರಾಜಕೀಯ ಕ್ಷೇತ್ರದಲ್ಲಿ ಕೂಡ ಪತ್ರಕರ್ತರದ್ದು ಮುಖ್ಯ ಪಾತ್ರ ಎಂದರು.

***************

ಸಮಾಜ ಕಲ್ಯಾಣ ಇಲಾಖೆಯ ಇಂದಿರಾಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಮೂಲಕ ಅನುಷ್ಠಾನ ಮಾಡಲಾಗುತ್ತಿರುವ ಕೆಎಎಸ್ ಪರೀಕ್ಷೆಯ ಪೂರ್ವಭಾವಿ ತರಬೇತಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳನ್ನು ತರಬೇತಿ ಸಂಸ್ಥೆಗಳಿಗೆ ನಿಯೋಜಿಸಲು ಕೌನ್ಸಿಲಿಂಗ್ ಅನ್ನು ಇದೇ 20 ರಂದು ಹಮ್ಮಿಕೊಳ್ಳಲಾಗಿದೆ.

ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ, ಡಾ.ಬಾಬು ಜಗಜೀವನ್ ರಾಮ್ ಭವನ, ಮಾಗಡಿ ಮುಖ್ಯ ರಸ್ತೆ, ಔಟರ್ ರಿಂಗ್ ರೋಡ್, ಸುಮ್ಮನಹಳ್ಳಿ ವೃತ್ತ, ಬೆಂಗಳೂರು ಇಲ್ಲಿ ಕೌನ್ಸಿಲಿಂಗ್ ಏರ್ಪಡಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಯೊಂದಿಗೆ ಹಾಜರಿರಬೇಕು. ಹೆಚ್ಚಿನ ವಿವರಕ್ಕಾಗಿ https://igccd.karnataka.gov.in ಜಾಲತಾಣಕ್ಕೆ ಭೇಟಿ ನೀಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಪ್ರಕಟಣೆ ತಿಳಿಸಿದೆ.

***************

ಬೆಂಗಳೂರಿನಲ್ಲಿಂದು ನಡೆಯುತ್ತಿರುವ ವಿಜಯ್ ಹಜಾರೆ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಸೌರಾಷ್ಟ್ರ ಮತ್ತು ವಿದರ್ಭ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ವಿದರ್ಭ ತಂಡ, ನಿಗದಿತ 50 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 317 ರನ್ ಮಾಡಿದೆ. ಗೆಲುವಿನ ಗುರಿಯನ್ನು ಬೆನ್ನತ್ತಿರುವ ಸೌರಾಷ್ಟ್ರ ತಂಡ ಇತ್ತೀಚಿನ ವರದಿ ಬಂದಾಗ 8 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 41 ರನ್ ಮಾಡಿ ಆಡುತ್ತಿದೆ.

***************

ತುಮಕೂರಿನಲ್ಲಿ ನಡೆಯುತ್ತಿರುವ ಕರ್ನಾಟಕ ಕ್ರೀಡಾಕೂಟದಲ್ಲಿ ನೆಟ್‌ಬಾಲ್ ಪಂದ್ಯಾವಳಿಯಲ್ಲಿ ದಕ್ಷಿಣ ಕನ್ನಡ ಮಹಿಳಾ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಫೈನಲ್ ಪಂದ್ಯದಲ್ಲಿ ಬೆಂಗಳೂರು ನಗರ ತಂಡದ ವಿರುದ್ಧ 28–17 ಅಂತರದಿಂದ ಗೆಲುವು ಸಾಧಿಸಿ, ಚಾಂಪಿಯನ್ ಪ್ರಶಸ್ತಿ ತನ್ನದಾಗಿಸಿಕೊಂಡಿತು. ಬೆಂಗಳೂರು ತಂಡ ರನರ್ ಅಪ್ ಸ್ಥಾನ ಪಡೆದರೆ, ಹಾಸನ ಮತ್ತು ರಾಮನಗರ ಮಹಿಳಾ ತಂಡಗಳು ಜಂಟಿಯಾಗಿ 3ನೇ ಸ್ಥಾನ ಪಡೆದವು.

***************

ಕೋಲಾರ ಜಿಲ್ಲೆಯ ಕೆಜಿಎಫ್ ತಾಲೂಕಿನ ಗುಟ್ಟಹಳ್ಳಿಯಲ್ಲಿರುವ ಬಂಗಾರು ತಿರುಪತಿ ಶ್ರೀ ವೆಂಕಟರಮಣ ಸ್ವಾಮಿ ದೇವಾಲಯದ ವಾರ್ಷಿಕ ಬ್ರಹ್ಮೋತ್ಸವ ಇದೇ 26 ರಿಂದ ಫೆಬ್ರವರಿ 4ರ ವರೆಗೆ ನಡೆಯಲಿದೆ.

*******ಮುಕ್ತಾಯ********